ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE 7/6/20

# ಪಕ್ಷಾಂತರ ನಿಷೇಧಕ್ಕೆ ಒಮ್ಮತಾಭಿಪ್ರಾಯ

ಬೆಂಗಳೂರು: ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಮುಖ ಅಂಗವಾದ ಶಾಸಕಾಂಗದ ಘನತೆ ಮತ್ತು ಗೌರವವನ್ನು ಎತ್ತಿ ಹಿಡಿಯುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂಬ ಸ್ಪಷ್ಟ ಒಮ್ಮತಾಭಿಪ್ರಾಯ ಮೂಡಿಬಂದಿದೆ ಎಂದು ವಿಧಾನ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ.

ಪಕ್ಷಾಂತರ ನಿಷೇಧ ಕಾನೂನನ್ನು ಮತ್ತಷ್ಟು ಬಲಪಡಿಸಲು ಗಣ್ಯರು ನೀಡಿರುವ ಸಲಹೆ-ಸೂಚನೆಗಳನ್ನು ಕ್ರೋಢೀಕರಿಸಿ ಡಾ.ಸಿ.ಪಿ.ಜೋಷಿ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿ ಸಭೆಯ ಮುಂದೆ ಮಂಡಿಸುವುದಾಗಿ ತಿಳಿಸಿದ್ದಾರೆ.



ಸಮಿತಿಯಲ್ಲಿ ವಿಧಾನ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಹಾಗೂ ಒಡಿಶಾ ವಿಧಾನಸಭೆಯ ಸಭಾಧ್ಯಕ್ಷ ಡಾ.ಸೂರ್ಜ್ಯ ನಾರಾಯಣ ಪಾತ್ರೊ ಅವರಿದ್ದು, ಕರ್ನಾಟಕದ ಪ್ರತಿನಿಧಿಯಾಗಿ ಕಾಗೇರಿ ಅವರು ಕಾನೂನು ಬಲಗೊಳಿಸುವ ಎಲ್ಲ ಪ್ರಯತ್ನ ಮಾಡಲಿದ್ದಾರೆಂದು ತಿಳಿಸಲಾಗಿದೆ.

ಸಂವಿಧಾನದ 10ನೇ ಅನುಸೂಚಿಯಡಿ ಪೀಠಾಸೀನಾಧಿಕಾರಿಗಳ ಅಧಿಕಾರಿಗಳು ಹಾಗೂ ಅದರಡಿ ರಚಿಸಲಾದ ನಿಯಮಗಳ ಮರು ಪರಿಶೀಲನೆ ಬಗ್ಗೆ ಅಭಿಪ್ರಾಯ ಪಡೆಯಲು ವಿಧಾನ ಪರಿಷತ್ ಸಭಾಪತಿ ಕೆ. ಪ್ರತಾಪ್‌ಚಂದ್ರಶೆಟ್ಟಿ ಹಾಗೂ ವಿಧಾನಸಭೆ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರ ಜಂಟಿ ಅಧ್ಯಕ್ಷತೆಯಲ್ಲಿ ನಡೆದ ವಿಧಾನ ಪರಿಷತ್‌ನ ಸಂಸದೀಯ ಗಣ್ಯರ ಸಭೆಯಲ್ಲಿ ವಿಧಾನ ಪರಿಷತ್ ಸಭಾನಾಯಕರು, ವಿರೋಧ ಪಕ್ಷದ ನಾಯಕರು, ಉಪಸಭಾಪತಿಗಳು ಹಾಗೂ ವಿಧಾನ ಪರಿಷತ್‌ನ ಇತರೆ ಗಣ್ಯರು ಸೇರಿದಂತೆ 21 ಗಣ್ಯರು ಭಾಗವಹಿಸಿ ತಮ್ಮ ಅಭಿಪ್ರಾಯಗಳನ್ನು ನೀಡಿದ್ದಾರೆ. ದೇಶದ ರಾಜಕೀಯ ವ್ಯವಸ್ಥೆ, ರಾಜಕೀಯ ಪಕ್ಷದ ಕಾರ್ಯವೈಖರಿ, ಚುನಾವಣಾ ಆಯೋಗ, ನ್ಯಾಯಾಂಗ ವ್ಯವಸ್ಥೆ ಕುರಿತಂತೆ ಚರ್ಚಿಸಿ ಅಭಿಪ್ರಾಯಗಳನ್ನು ನೀಡಿದ್ದಾರೆಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.